ಇ) ರಾಜ್ಯದ ಹಣಕಾಸು ಆಯೋಗ ನೀಡುವ ಶಿಫಾರಸ್ಸಿನ ಮೇಲೆ ರಾಜ್ಯದ ಪಟ್ಟಣಗಳ ಹಾಗೂ ಹಳ್ಳಿಗಳಿಗೆ ಅನುದಾನವನ್ನು ಬಿಡುಗಡೆ ಮಾಡಲಾಗುವುದು. ಹಾಗೂ ವಿವಿಧ ಯೋಜನೆಗಳಿಗೆ ಬರುವ ಅನುದಾನವು ಸಂಬಂಧಿಸಿದ ಯೋಜನೆಯ ಮಾರ್ಗಸೂಚಿಯನ್ವಯ ಬಿಡುಗಡೆ ಮಾಡಲಾಗುತ್ತಿದೆ. ಮಾರ್ಗಸೂಚಿಯು ಆ ಕ್ಷೇತ್ರದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಪ್ರಾದೇಶಿಕ ಹಿಂದುಳಿದಿರುವಿಕೆ ಒಳಗೊಂಡಂತೆ ಇರುತ್ತದೆ.

877 (1242) ಶ್ರೀ ಶಿವಶಂಕರ್ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ವರ್ಗಾವಣೆ ಗೊಂದಲ ಅತಿರೇಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಸಕ್ರಮವಾಗಿ ವರ್ಗಾವಣೆಯಾಗುತ್ತಿಲ್ಲವೆಂಬ ಸಾರ್ವಜನಿಕ ದೂರುಗಳು ಕೇಳಿಬರುತ್ತಿದ್ದು ಇದರ ಬಗ್ಗೆ ಸರ್ಕಾರದ ಸ್ಪಷ್ಟವಾದ ವಿವರಣೆ ಏನು?

ಶ್ರೀ ಬಿ.ಎಸ್. ಹೊರಟ್ಟಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):

ಅ) ಸರ್ಕಾರಿ ಆದೇಶದ ಸಂಖ್ಯೆ: ಇಡಿ 211 ಇಟಿಆರ್ 2005, ದಿ: 18.01.2006ರ ಪ್ರಕಾರ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ವರ್ಗಾವಣೆಗಳನ್ನು ಕೌನ್ಸಿಲಿಂಗ್ ಮುಖಾಂತರ ಮಾಡಲು ಆದೇಶಿಸಲಾಗಿದೆ.

* ಅಲ್ಲದೆ ಸರ್ಕಾರದ ಅನುಮೋದನೆ ಮೇರೆಗೆ (ಇಡಿ) ಖಾಲಿ ಇರುವ ಹುದ್ದೆಗಳಿಗೆ ಮಾತ್ರ ಕೋರಿಕೆ ವರ್ಗಾವಣೆಗಳನ್ನು ಮಾಡಲಾಗಿದೆ. (ಕೇಡರ್ ವೃಂದಕ್ಕೆ ಶೇ. 5 ರಷ್ಟು ಮೀರದಂತೆ)

* ಈ ವರ್ಗಾವಣೆಯಲ್ಲಿ ಯಾವುದೇ ಗೊಂದಲ ಅತಿರೇಖವಾಗಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

878 (1243) ಶ್ರೀ ಶಿವಶಂಕರ್ ರೆಡ್ಡಿ ಎನ್. ಹೆಚ್. (ಗೌರಿಬಿದನೂರು): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?